# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | (450) 396 |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 30 /01/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

<table>
<tr><th>ಕ್ರ.<br>ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ನೂತನವಾಗಿ ಅಭಿವೃದ್ಧಿ ಪಡಿಸಿದ ತಂತ್ರಾಂಶದಲ್ಲಿ ತಾಂತ್ರಿಕ ದೋಷ ಇದ್ದ ಕಾರಣ, (ದಿನಾಂಕ:17-10-2023 ರಿಂದ ದಿನಾಂಕ:10-06-2024 ರವರೆಗೆ ಕಾರ್ಮಿಕರಿಗೆ ತಮ್ಮ ಗುರುತಿನ ಚೀಟಿಯ ನವೀಕರಣ ಮಾಡಲು ಸಾಧ್ಯವಾಗದಿರುವುದರಿಂದ ಹಲವಾರು ಕಾರ್ಮಿಕರು ವಿವಿಧ ಸಹಾಯಧನಗಳಿಗೆ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸಲು ಸಾಧ್ಯವಾಗದೆ ಸೌಲಭ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು.</td></tr>
<tr><td>ಆ)</td><td>ಬಂದಿದ್ದಲ್ಲಿ, ಅರ್ಜಿ ಸಲ್ಲಿಸಲು ಸಾಧ್ಯವಾಗದವರಿಗೆ ಮಂಡಳಿಯು ಹೆಚ್ಚುವರಿ ಕಾಲಾವಕಾಶವನ್ನು ನೀಡಿದ್ದು, ಆಗ ಅರ್ಜಿ ಸಲ್ಲಿಸಿದವರಿಗೆ ಹಲವಾರು ಆರ್ಥಿಕವಾದ ಕಾರಣಗಳನ್ನು ನೀಡಿ ಮದುವೆಯ ಸಹಾಯಧನವನ್ನು ತಿರಸ್ಕೃತಗೊಳಿಸಿದ್ದು ಹಲವಾರು ಕಾರ್ಮಿಕರಿಗೆ ಅನ್ಯಾಯವಾಗಿರುವುದನ್ನು ಸರಿಪಡಿಸಲು ಸರ್ಕಾರ ವಹಿಸಿರುವ ಕ್ರಮಗಳೇನು;</td><td rowspan="2">ದಿನಾಂಕ:17/10/2023 ರಿಂದ 10/06/2024ರ ವರೆಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೂತನ ತಂತ್ರಾಂಶವು ಅಭಿವೃದ್ಧಿಪಡಿಸುವ ಸಲುವಾಗಿ ಹಾಗೂ ತಾಂತ್ರಿಕ ದೋಷಗಳ ನಿಮಿತ್ತ ಅರ್ಜಿಗಳು ಸ್ವೀಕೃತವಾಗುತ್ತಿರಲಿಲ್ಲ.<br><br>ಈ ಕಾರಣಕ್ಕಾಗಿ ದಿನಾಂಕ:10/06/2024 ರಂದು ಸುತ್ತೋಲೆಯನ್ನು ಹೊರಡಿಸಲಾಗಿದ್ದು, ದಿನಾಂಕ:11/06/2024 ರಿಂದ 30/09/2024ರ ವರೆಗೆ ಅರ್ಜಿ ಸಲ್ಲಿಸಲು ಸಾಧ್ಯವಾಗದ ಫಲಾನುಭವಿಗಳಿಗೆ ಹೆಚ್ಚುವರಿ ಕಾಲಾವಕಾಶವನ್ನು ನೀಡಲಾಗಿರುತ್ತದೆ ಅದರಂತೆ ಸಹಾಯಕ ಕಾರ್ಮಿಕ ಆಯುಕ್ತರು ಹಾಗೂ ಕಾರ್ಮಿಕ ಅಧಿಕಾರಿಗಳಿಗೆ ಸದರಿ ಮಾಹಿತಿಯನ್ನು ನೀಡಿ ಮಂಡಳಿಯ ವೆಬ್-ಸೈಟ್ ನಲ್ಲಿಯು ಸಹ ಪ್ರಕಟಿಸಲಾಗಿರುತ್ತದೆ. ಈ ಸಮಯದಲ್ಲಿ ಹಲವಾರು ಫಲಾನುಭವಿಗಳು ಸೌಲಭ್ಯವನ್ನು ಪಡೆದಿರುತ್ತಾರೆ.</td></tr>
<tr><td>ಇ)</td><td>ತಾಂತ್ರಿಕ ದೋಷ ಇದ್ದ ಅವಧಿಯಲ್ಲಿ ನವೀಕರಣ ಇಲ್ಲದೇ ಇರುವ ಕಾರ್ಮಿಕರು ನಂತರದಲ್ಲಿ ಅರ್ಜಿ ಸಲ್ಲಿಸಿದ್ದು ಈ ಕಾರ್ಮಿಕರಿಗೆ ಯಾವುದೇ ಕಾರಣಕ್ಕೂ ಸಹಾಯಧನವನ್ನು ನಿರಾಕರಿಸದೆ ಮಂಜೂರು ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?</td></tr>
</table>

**ಕಾಇ 47 ಎಲ್ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**